## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ : 2015-16ನೇ ಸಾಲಿನಲ್ಲಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಗೆ ಮೊದಲನೇ ಕಂತಿನ ಅನುದಾನ ಬಿಡುಗಡೆ ಕುರಿತು.

ಓದಲಾಗಿದೆ: ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಅ.ಟಿ. ಸಂಖ್ಯೆ : ಗ್ರಾಅಪ/233/ಎಎಫ್ಎಸ್/2015 ದಿನಾಂಕ 08.04.2015

**ಪ್ರಸ್ತಾವನೆ :**

2015-16ನೇ ಸಾಲಿನಲ್ಲಿ ರಾಜ್ಯ ಆಯವ್ಯಯದಡಿ ರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಗೆ ರೂ.150.00 ಲಕ್ಷಗಳನ್ನು ಕರ್ನಾಟಕ ಜೈವಿಕ ಇಂಧನ ನೀತಿ ಅನುಷ್ಠಾನಕ್ಕಾಗಿ ಒದಗಿಸಲಾಗಿದೆ.

ಓದಲಾದ ಅನಧಿಕೃತ ಟಿಪ್ಪಣಿಯಲ್ಲಿ 2015-16ನೇ ಸಾಲಿನ ಮೊದಲನೇ ಕಂತಿನ ಅನುದಾನವನ್ನು 1ನೇ ತ್ರೈಮಾಸಿಕ ಅವಧಿಯಲ್ಲಿ ಬಿಡುಗಡೆ ಮಾಡಬೇಕೆಂದು ಆದೇಶಿಸಿರುತ್ತಾರೆ. ಆದ್ದರಿಂದ 2015-16ನೇ ಸಾಲಿನಲ್ಲಿ ರಾಜ್ಯ ಆಯವ್ಯಯದಡಿ ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿಗೆ ₹ 150.00 ಲಕ್ಷಗಳ ಅನುದಾನ ನಿಗದಿಪಡಿಸಲಾಗಿದ್ದು, ಈ ಪೈಕಿ ಮೊದಲನೇ ಕಂತಿನ ಅನುದಾನ ₹ 37.50 ಲಕ್ಷಗಳನ್ನು ಲೆಕ್ಕ ಶೀರ್ಷಿಕೆ 2501-04-105-0-03-059 (ಯೋಜನೆ)ರಡಿ ಬಿಡುಗಡೆ ಮಾಡಲು ಸರ್ಕಾರ ತೀರ್ಮಾನಿಸಿದೆ. ಪ್ರಯುಕ್ತ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ35/ಜೈಅಯೋ/2015, ಬೆಂಗಳೂರು, ದಿನಾಂಕ 18.05.2015**

ಪ್ರಸ್ತಾವನೆಯಲ್ಲಿ ವಿವರಿಸಲಾದಂತೆ, ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು ರವರಿಗೆ ಲೆಕ್ಕ ಶೀರ್ಷಿಕೆ 2501-04-105-0-03-059 (ಯೋಜನೆ)ರಡಿ **₹ 37.50** ಲಕ್ಷಗಳನ್ನು (ರೂ. ಮೂವತ್ತೇಳು ಲಕ್ಷದ ಐವತ್ತು ಸಾವಿರಗಳು ಮಾತ್ರ) ಮೊದಲನೇ ಕಂತಿನ ಅನುದಾನವನ್ನಾಗಿ ಜೈವಿಕ ಇಂಧನ ಅಭಿವೃದ್ಧಿಗಾಗಿ ಮಾತ್ರ ವಿನಿಯೋಗಿಸತಕ್ಕದ್ದು.

ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು ರವರು ಗ್ರಾಂಟ್ - ಇನ್ - ಏಡ್ ಬಿಲ್ಲನ್ನು ಸಲ್ಲಿಸಿ, ನಿರ್ದೇಶಕರು (ಗ್ರಾಮೂಸೌ-2) ಹಾಗೂ ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿರವರ ಮೇಲು ರುಜು ಪಡೆದು ಖಜಾನೆಯಿಂದ ಅನುದಾನ ಪಡೆಯತಕ್ಕದ್ದು. ಬಿಡುಗಡೆ ಮಾಡಲಾಗಿರುವ ಅನುದಾನಕ್ಕೆ ವೆಚ್ಚದ ವಿವರಗಳನ್ನು ಸರ್ಕಾರಕ್ಕೆ ನಿಗದಿತವಾಗಿ ಸಲ್ಲಿಸುವುದು.

ಇಲಾಖಾ ಆಂತರಿಕ ಆರ್ಥಿಕ ಸಲಹೆಗಾರರ ಅ.ಟಿ. ಸಂಖ್ಯೆ: ಗ್ರಾಅಪ/314/ಪಿಬಿಎಸ್/2015 ದಿನಾಂಕ15.05.2015ರನ್ವಯ ಸಹಮತಿಯನ್ನು ಪಡೆದು ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಎನ್. ಕೃಷ್ಣ)
ನಿರ್ದೇಶಕರು (ಗ್ರಾಮೂಸೌ-2) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ

ಇವರುಗಳಿಗೆ :

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು

2. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಜೈವಿಕ ಇಂಧನ ಅಭಿವೃದ್ಧಿ ಮಂಡಳಿ, ಬೆಂಗಳೂರು.
3. ಉಪ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
4. ಅಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
5. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು / ಕಾರ್ಯದರ್ಶಿಗಳು (ಪಂ.ರಾಜ್) ರವರ ಆಪ್ತ ಕಾರ್ಯದರ್ಶಿಗಳು, ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
6. ಉಪ ನಿರ್ದೇಶಕರು (ತಾಂತ್ರಿಕ), ರಸ್ತೆ ಮತ್ತು ಸೇತುವೆ ವಿಭಾಗ, ಗ್ರಾ. ಮತ್ತು ಪಂ. ರಾಜ್ ಇಲಾಖೆ.
7. ಉಪ ನಿರ್ದೇಶಕರು, ಟ್ರೆಜರಿ ನೆಟ್‌ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖನಿಜ ಭವನ, ಬೆಂಗಳೂರು.
8. ರಕ್ಷ ಕಡತಕ್ಕೆ / ಹೆಚ್ಚುವರಿ ಪ್ರತಿ.